**Akashvani : Bangalore**
**Regional Bulletin In Kannada**
**17.10.2025 / 6.40 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಕೇಂದ್ರ ಸರ್ಕಾರದ ಜನಪ್ರಿಯ ಯೋಜನೆಗಳನ್ನು ಸದುಪಯೋಗ ಪಡೆಯಲು ಕಲ್ಯಾಣ ಕರ್ನಾಟಕ ಜನತೆಗೆ ಸಚಿವೆ ನಿರ್ಮಲಾ ಸೀತಾರಾಮನ್ ಕರೆ

೨. ಬಂಡವಾಳ ಆಕರ್ಷಣೆ ನಿಟ್ಟಿನಲ್ಲಿ ರಾಜ್ಯ ಮೊದಲ ಸ್ಥಾನದಲ್ಲಿ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಬೆಂಗಳೂರು ನಗರದ ಉದ್ದೇಶಿತ ಕ್ವಾಂಟಮ್ ಸಿಟಿ ಅಭಿವೃದ್ಧಿಗೆ, ವಿಶ್ವದ ಪ್ರಮುಖ ಸಂಶೋಧನಾ ಸಂಸ್ಥೆ ಜೊತೆ ಪಾಲುದಾರಿಕೆ ಹೊಂದಲು ಮಾತುಕತೆ

೪. ವಿಶೇಷಚೇತನರಿಗಾಗಿ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ನೇರಳೆ ಹಬ್ಬ; ಒಂದು ಲಕ್ಷ ಫಲಾನುಭವಿಗಳಿಗೆ ವಿವಿಧ ಸೇವೆ ಒದಗಿಸಲು ಚಿಂತನೆ

****************

ಕಲ್ಯಾಣ ಕರ್ನಾಟಕದಲ್ಲಿ ಕೃಷಿ ಸಂಸ್ಕರಣೆಗೆ ಒತ್ತಾಸೆ ನೀಡುವ ಹುಣಸೆ ಮತ್ತು ಶೇಂಗಾ ಸಂಸ್ಕರಣ ಘಟಕ ಮತ್ತು ರೈತ ತರಬೇತಿ ಕೇಂದ್ರವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಲೋಕಾರ್ಪಣೆ ಮಾಡಿದರು. ನಬಾರ್ಡ್ ಸಹಯೋಗದಲ್ಲಿ ಕೇಂದ್ರ ಸರ್ಕಾರದಿಂದ ಕೂಡ್ಲಿಗಿ ತಾಲೂಕಿನ ಕಸಪುರ ಗ್ರಾಮದಲ್ಲಿ ೪೩೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ. ಈ ಸಂದರ್ಭದಲ್ಲಿ ನಿರ್ಮಲಾ ಸೀತಾರಾಮನ್ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಹೆಬ್ಬಾಗಿಲಾದ ಗುಡೆಕೋಟೆಯ ಕಸಪುರ ಗ್ರಾಮದಲ್ಲಿ ನಿರ್ಮಾಣಗೊಂಡಿರುವ ಹುಣಸೆ ಮತ್ತು ಶೇಂಗಾ ಸಂಸ್ಕರಣಾ ಘಟಕ ಉದ್ಘಾಟಿಸಲಾಗಿದ್ದು, ಎಲ್ಲ ರೈತರು ಇದರ ಪ್ರಯೋಜನ ಪಡೆಯಬೇಕು ಎಂದರು. ಕೇಂದ್ರ ಸರ್ಕಾರದಿಂದ ಅಪೌಷ್ಟಿಕತೆ ನಿರ್ಮೂಲನೆಗೆ ಪೋಷಣ್ ಮಾಸಾಚರಣೆ ಗರ್ಭಿಣಿ ಬಾಣಂತಿಯರಿಗಾಗಿ ಮಾತೃ ವಂದನಾ ಯೋಜನೆ ಬೇಟಿ ಬಚಾವೋ ಭೇಟಿ ಬಡಾವೋ ಎಂಬ ಅನೇಕ ಜನಪ್ರಿಯ ಯೋಜನೆಗಳಿವೆ ಅದರ ಸದುಪಯೋಗವನ್ನು ಈ ಕಲ್ಯಾಣ ಕರ್ನಾಟಕ ಭಾಗದ ಜನತೆ ಪಡೆಯಬೇಕು ಎಂದರು. ಸಂಸ್ಕರಣ ಘಟಕವನ್ನು ವೀಕ್ಷಿಸಿ ಅದರ ಕಾರ್ಯ ನಿರ್ವಹಣೆ ಕುರಿತು ಮಾಹಿತಿ ಪಡೆದುಕೊಂಡರು.

ವಿಜಯನಗರ ಜಿಲ್ಲೆ ಕಸಾಪುರ ಗ್ರಾಮದಲ್ಲಿ ಸಂಸದರ ಪ್ರದೇಶಾಭಿವೃದ್ಧಿ ಅನುದಾನ ಯೋಜನೆಯಡಿ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ. ಯಾವುದೇ ಸರ್ಕಾರವಿರಲಿ ದೇಶದ ಎಲ್ಲ ಭಾಗದ ಜನರನ್ನು

ಅಭಿವೃದ್ಧಿ ಪಥದತ್ತ ಕೊಂಡೊಯ್ಯುವುದು ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

****************

ರಾಜ್ಯದಲ್ಲಿ ಅನೇಕ ಬಂಡವಾಳ ಹೂಡಿಕೆದಾರರು ಸಾಕಷ್ಟು ಹೂಡಿಕೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಐ-ಫೋನ್ ತಯಾರಿಕೆಯಲ್ಲಿ ಸಂಸ್ಥೆಗಳು ಪ್ರಮುಖ ಬಂಡವಾಳ ಹೂಡಿಕೆ ಮಾಡಿವೆ. ಜಾಗತಿಕ ಬಂಡವಾಳ ಹೂಡಿಕೆ ಶೃಂಗಸಭೆಯಲ್ಲೂ ಬಂಡವಾಳ ಆಕರ್ಷಣೆ ನಿಟ್ಟಿನಲ್ಲಿ ರಾಜ್ಯ ಮೊದಲ ಸ್ಥಾನದಲ್ಲಿದೆ ಎಂದು ಹೇಳಿದರು.

ಆಂಧ್ರಪ್ರದೇಶದಲ್ಲಿ ಗೂಗಲ್ ಬಂಡವಾಳ ಹೂಡಿಕೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಅವರು, ಹೂಡಿಕೆದಾರರು ತಮಗೆ ಇಷ್ಟವಾದ ತಾಣಗಳನ್ನು ಆರಿಸಿಕೊಳ್ಳುತ್ತಾರೆ ಎಂದು ಹೇಳಿದರು.

****************

ಮೈಸೂರು ಜಿಲ್ಲೆಯ ಸರಗೂರು ತಾಲೂಕಿನ ಬಡಗಲಾಪುರ ಗ್ರಾಮದಲ್ಲಿ ಹುಲಿ ದಾಳಿಗೆ ತುತ್ತಾದ ಮಹದೇವಗೌಡ ಅವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಚಿಕಿತ್ಸೆಗೆ ಒಳಗಾಗಿರುವ ಗಾಯಾಳು ಮಹದೇವಗೌಡ ಅವರ ಕುಟುಂಬದವರ ಜೊತೆ ಚರ್ಚಿಸಿದ ಬಳಿಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಎರಡು ಕಣ್ಣುಗಳ ದೃಷ್ಟಿ ಮತ್ತೆ ಬರುವ ಸಾಧ್ಯತೆ ಇಲ್ಲ ಎಂದು ವೈದ್ಯರು ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಪರಿಹಾರವನ್ನು ಗಾಯಾಳು ಲೆಕ್ಕದಲ್ಲಿ ಕೊಡಬಾರದು. ಬದುಕು ಕಳೆದುಕೊಂಡ, ಕುಟುಂಬದ ಆಸರೆ ಕಳೆದುಕೊಂಡವರ ಲೆಕ್ಕದಲ್ಲಿ ಪೂರ್ತಿ ಪರಿಹಾರ ಒದಗಿಸುವಂತೆ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

****************

ರಾಜ್ಯದಲ್ಲಿ ೩೫ ಸಾವಿರ ಸರ್ಕಾರಿ ಉದ್ಯೋಗ ನೇಮಕಕ್ಕೆ ಅನುಮೋದನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಮೈಸೂರು ವಿಭಾಗದ ಬೃಹತ್ ಉದ್ಯೋಗ ಮೇಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಕಾರ್ಯಕ್ರಮದ ಉದ್ದೇಶ ನಿರುದ್ಯೋಗಿಗಳಿಗೆ ಉದ್ಯೋಗ ನೀಡಬೇಕೆಂಬುದಾಗಿದೆ. ಬಹಳಷ್ಟು ವಿದ್ಯಾರ್ಥಿ, ವಿದ್ಯಾರ್ಥಿನಿಯರುಗಳು ಪದವಿ ಪಡೆದ ನಂತರ ಉದ್ಯೋಗ ಸಿಗದೇ ಸಂಕಷ್ಟದಲ್ಲಿದ್ದಾರೆ, ಅವರಿಗೆ ಉದ್ಯೋಗ ನೀಡಲು ಕಂಪನಿಗಳ ಸಹಯೋಗದೊಂದಿಗೆ ಎಲ್ಲಾ ಜಿಲ್ಲೆಗಳಲ್ಲಿ ಉದ್ಯೋಗ ಮೇಳ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಕಳೆದ ಎರಡು ವರ್ಷಗಳಲ್ಲಿ ೫೮ ಸಾವಿರದ ೫೯೮ ವಿದ್ಯಾರ್ಥಿಗಳು ನೋಂದಾವಣೆ ಮಾಡಿಕೊಂಡಿದ್ದಾರೆ. ಅದರಲ್ಲಿ ೧೧ ಸಾವಿರದ ೭೦೫ ವಿದ್ಯಾರ್ಥಿಗಳಿಗೆ ಉದ್ಯೋಗ ನೀಡಲಾಗಿದೆ. ೨೨ ಸಾವಿರದ ೮೯೦ ವಿದ್ಯಾರ್ಥಿಗಳು ಶಾರ್ಟ್ ಲಿಸ್ಟ್ ನಲ್ಲಿದ್ದಾರೆ. ಖಾಲಿ ಇರುವ ಸರ್ಕಾರಿ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕಾರ್ಯಕ್ರಮದಲ್ಲಿ ಕೌಶಲ್ಯ ತರಬೇತಿ ಇಲಾಖೆ ಹಾಗೂ ವೈದ್ಯಕೀಯ ಇಲಾಖೆ ಸಚಿವ ಶರಣ ಪ್ರಕಾಶ್ ಪಾಟೀಲ್ ಅವರು ಮಾತನಾಡಿ, ಉದ್ಯೋಗ ಮೇಳ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ನಡೆಸಲಾಗುತ್ತಿದೆ. ಇಂದಿನ ಉದ್ಯೋಗ ಮೇಳದಲ್ಲಿ ೨೨೦ ಕ್ಕೂ ಹೆಚ್ಚು ಕಂಪನಿಗಳು ಬಂದಿದ್ದು, ಈಗಾಗಲೇ ೧೨ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿಯಾಗಿದ್ದಾರೆ ಎಂದು ತಿಳಿಸಿದರು.

****************

ಬೆಂಗಳೂರು ನಗರದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವಂತಹ ಕ್ವಾಂಟಮ್ ಸಿಟಿ ಅಭಿವೃದ್ಧಿಗೆ, ವಿಶ್ವದ ಪ್ರಮುಖ ಸಂಶೋಧನಾ ಸಂಸ್ಥೆಯಾಗಿರುವ ಇಟಿಹೆಚ್ ಹಾಗೂ ಜಿನೇವಾದ ಸೈನ್ಸ್ ಅಂಡ್ ಡಿಪ್ಲೋಮಸಿ ಆಂಟಿಸಿಪೇಟರ್‌ನ ಜೊತೆ ಪಾಲುದಾರಿಕೆ ಹೊಂದಲು ಚಿಂತನೆ ನಡೆಸಲಾಗುತ್ತಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಭೋಸರಾಜು ತಿಳಿಸಿದ್ದಾರೆ. ಜಿನೇವಾದಲ್ಲಿ ಸೈನ್ಸ್ ಅಂಡ್ ಡಿಪ್ಲೋಮಸಿ ಆಂಟಿಸಿಪೇಟರ್ ಸಮಾವೇಶದಲ್ಲಿ ಭಾಗವಹಿಸಿ ಅವರು ಮಾತನಾಡಿ, ಕರ್ನಾಟಕ ರಾಜ್ಯ ವಿಶೇಷವಾಗಿ ಬೆಂಗಳೂರು ನಗರವನ್ನು ವಿಶ್ವದ ಕ್ವಾಂಟಮ್ ಕ್ಷೇತ್ರದ ಕೇಂದ್ರವನ್ನಾಗಿಸುವ ನಿಟ್ಟಿನಲ್ಲಿ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ ಎಂದರು. ಸಚಿವರು, ಈ ಹಿನ್ನಲೆಯಲ್ಲಿ ಇಟಿಎಚ್ ಜ್ಯೂರಿಕ್ ಮಂಡಳಿಯ ಅಧ್ಯಕ್ಷ ಡಾ. ಮೈಕೇಲ್ ಹೆಂಗಾರ್ಟ್ನರ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

****************

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಡಿಸೆಂಬರ್ ತಿಂಗಳಲ್ಲಿ ವಿಶೇಷ ಚೇತನರಿಗಾಗಿ ನೇರಳೆ ಹಬ್ಬ ಆಚರಿಸಿ ೧ ಲಕ್ಷ ವಿಶೇಷ ಚೇತನರಿಗೆ ವಿವಿಧ ರೀತಿಯ ಸೇವೆಗಳನ್ನು ಒದಗಿಸಲು ಯೋಚಿಸಲಾಗುತ್ತಿದೆ ಎಂದು ರಾಜ್ಯ ವಿಶೇಷ ಚೇತನರ ಹಕ್ಕುಗಳ ಅಧಿ ನಿಯಮದ ಆಯೋಗದ ಆಯುಕ್ತ ದಾಸ್ ಸೂರ್ಯವಂಶಿ ತಿಳಿಸಿದ್ದಾರೆ. ದೇವನಹಳ್ಳಿಯ ವಿಕಲಚೇತನ ಪುನರ್ ವಸತಿ ಕೇಂದ್ರದಲ್ಲಿ ನಡೆದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ನೇರಳೆ ಹಬ್ಬ ಕಾರ್ಯಕ್ರಮಕ್ಕೆ ಸರ್ಕಾರೇತರ ಸಂಸ್ಥೆಗಳ ಸಹಕಾರವೂ ಮುಖ್ಯವಾಗಿರುತ್ತದೆ ಎಂದು ಹೇಳಿದರು. ವಿಶೇಷಚೇತನ ಸಮುದಾಯಕ್ಕೆ ತಳಮಟ್ಟದಲ್ಲಿ ಸೇವೆಗಳನ್ನು ಒದಗಿಸಬೇಕೆಂಬ ಉದ್ದೇಶದಿಂದ ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಪುನರ್ವಸತಿ ಕೇಂದ್ರಗಳನ್ನು ತೆರೆದು ವಿಶೇಷಚೇತನ ಮಕ್ಕಳಿಗೆ ವೈದ್ಯಕೀಯ ಹಾಗೂ ಸಮುದಾಯ ಆಧಾರಿತ ಸೇವೆಗಳನ್ನು ಉಚಿತವಾಗಿ ಒದಗಿಸಲಾಗುತ್ತಿದೆ.

****************

ರಾಷ್ಟ್ರೀಯ ಮಾನಸಿಕ ಹಾಗೂ ನರ ವಿಜ್ಞಾನ ಸಂಸ್ಥೆ - ನಿಮ್ಹಾನ್ಸ್ ಆಶ್ರಯದಲ್ಲಿಂದು ಮಾನಸಿಕ ಆರೋಗ್ಯ ಸಂತೆ - ೪.೦ ಸಮುದಾಯ ಕಾರ್ಯಕ್ರಮ ಇಂದು ಆರಂಭವಾಯಿತು.

ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯೆ ತಡೆ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಇದೇ ಸಂದರ್ಭದಲ್ಲಿ ಮಾಹಿತಿ ಶಿಕ್ಷಣ ಸಂವಹನ ಸಾಮಗ್ರಿಗಳನ್ನು ಬಿಡುಗಡೆಗೊಳಿಸಲಾಯಿತು. ರೈಟ್ ಲೈವ್ಲಿ ಹುಡ್ ಮತ್ತು ಪದ್ಮಶ್ರೀ ಪುರಸ್ಕೃತ ಸಾಮಾಜಿಕ ಕಾರ್ಯಕರ್ತ ಡಾ. ಸುದರ್ಶನ್ ಎಚ್. ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ, ಮಾನಸಿಕ ತೊಂದರೆಯನ್ನು ಮೀರಿ, ಜೀವನವನ್ನು ಸಂತೋಷದಿಂದ

ಕಳೆಯಬೇಕು, ಮಾನಸಿಕ ಆರೋಗ್ಯ ಸಂತೆಗಳಂತಹ ಕ್ರಮಗಳು ಸಂತೋಷ ವರ್ಧಿಸುವ ಕಾರ್ಯಕ್ರಮಗಳಾಗಿವೆ. ನಿಮ್ಹಾನ್ಸ್ ಈ ನಿಟ್ಟಿನಲ್ಲಿ ಸೇವಾ ಮನೋಭಾವದಿಂದ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು. ನಿಮ್ಹಾನ್ಸ್ ಅಧ್ಯಕ್ಷೆ ಡಾ. ಪ್ರತಿಮಾ ಮೂರ್ತಿ, ದುಃಖಗಳನ್ನು ಹಂಚಿಕೊಂಡಾಗ ಭಾರ ಕಡಿಮೆಯಾಗುತ್ತದೆ. ಸಂತಸವನ್ನು ಹಂಚಿಕೊಂಡಾಗ ಸಂತೋಷ ದುಪ್ಪಟ್ಟಾಗುತ್ತದೆ. ಮಾನಸಿಕ ಆರೋಗ್ಯ ಶಿಕ್ಷಣದಲ್ಲಿ ಸಮುದಾಯಗಳನ್ನು ತೊಡಗಿಸಿಕೊಳ್ಳುವುದರಿಂದ ಅನೇಕ ಕೀಳರಿಮೆಗಳನ್ನು ನಿವಾರಿಸಬಹುದು. ಅಸಹಾಯಕರಿಗೆ ಆಸೆಯ ಬೆಳಕಾಗಬಹುದು ಎಂದು ಹೇಳಿದರು. ಎರಡು ದಿನಗಳ ಕಾಲ ನಡೆಯುವ ಈ ಕಾರ್ಯಕ್ರಮದಲ್ಲಿ ೮೪ ಸಂಘಟನೆಗಳು ಪಾಲ್ಗೊಂಡಿದ್ದು, ೩ ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು, ಆರೋಗ್ಯ ವೃತ್ತಿಪರರು ಪಾಲ್ಗೊಂಡಿದ್ದಾರೆ.

****************

ರಾಜ್ಯದ ಕರಾವಳಿ ಪ್ರದೇಶದ ಒಂದೆರಡು ಸ್ಥಳಗಳಲ್ಲಿ ಮುಂದಿನ ೭ ದಿನಗಳಲ್ಲಿ ಬಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್. ಪಾಟೀಲ್ ವಿವರ ನೀಡಿದ್ದಾರೆ.

****ಧ್ವನಿ****ಸಿ.ಎಸ್. ಪಾಟೀಲ್

****************

ಮೂತ್ರಪಿಂಡ ಮತ್ತು ಮೂತ್ರಾಂಗ ಸಂಬಂಧಿತ ರೋಗಗಳ ಚಿಕಿತ್ಸೆಯಲ್ಲಿ ಮುಂಚೂಣಿಯಲ್ಲಿರುವ ಬೆಂಗಳೂರಿನ ನೆಫ್ರೋ ಯೂರೋಲಜಿ ಸಂಸ್ಥೆಯು ಪ್ರತಿಷ್ಠಿತ ರಾಷ್ಟ್ರೀಯ ಹಾಸ್ಪಿಟಲ್ ಅಕ್ರೆಡಿಟೇಶನ್ ಮಂಡಳಿಯಿಂದ ಮಾನ್ಯತೆ ಪತ್ರವನ್ನು ಪಡೆದುಕೊಂಡಿದೆ. ಈ ಸಂಸ್ಥೆ ದೇಶದ ಅಗ್ರ ೧೦ ವಿಶೇಷ ಆಸ್ಪತ್ರೆಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದೆ. ಇದೀಗ ಸಂಸ್ಥೆಯು ಸುರಕ್ಷತೆ ಮತ್ತು ಅತ್ಯುತ್ತಮ ವೈದ್ಯಕೀಯ ಗುಣಮಟ್ಟಕ್ಕೆ ಎನ್‌ಎಬಿಎಚ್ ನೀಡುವ ಪ್ರಮಾಣ ಪತ್ರ ಪಡೆದುಕೊಂಡಿರುವುದು ಸಂಸ್ಥೆಯ ಗುಣಮಟ್ಟದ ಸೇವೆಗೆ ದೊರೆತಿರುವ ರಾಷ್ಟ್ರೀಯ ಮಾನ್ಯತೆಯಾಗಿದೆ.

****************

ಬೆಂಗಳೂರಿನ ಡಾ. ರಾಜ್‌ಕುಮಾರ್ ಒಳಾಂಗಣ ಕ್ರೀಡಾಂಗಣದಲ್ಲಿ ನಾಳೆ ಸಂಸದ್ ಖೇಲ್ ಮಹೋತ್ಸವ ಕ್ರೀಡಾ ಸ್ಪರ್ಧೆ ಏರ್ಪಡಿಸಲಾಗಿದೆ. ಕೇಂದ್ರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಗಾತ್ರದ ಕೈಗಾರಿಕೆಗಳ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಕಾರ್ಯಕ್ರಮದಲ್ಲಿ ಉಪಸ್ಥಿತರಿರುತ್ತಾರೆ.

****************

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಸೀರೆ ಪೂರೈಕೆ ಮಾಡುವ ಕಾರ್ಯಾದೇಶವನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ನೀಡಬೇಕೆಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದಾರೆ.

ಸರ್ಕಾರ ಒಟ್ಟು ೨ ಲಕ್ಷದ ೭೯ ಸಾವಿರದ ೬೬೮ ಸೀರೆಗಳನ್ನು ಐಸಿಡಿಎಸ್ ಯೋಜನೆ ಅಡಿ ಕೆಟಿಪಿಪಿ ನಿಯಮಗಳ ಅನ್ವಯ ಖರೀದಿಸಲು ಉದ್ದೇಶಿಸಿರುವುದಾಗಿ ತಿಳಿದುಬಂದಿದೆ.

ಈ ಸೀರೆಗಳ ಪೂರೈಕೆ ಆದೇಶವನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ನೀಡಿದರೆ ನೇಕಾರರಿಗೆ ಉದ್ಯೋಗ ದೊರಕಿಸುವುದರ ಜೊತೆಗೆ ನಷ್ಟದಲ್ಲಿರುವ ನಿಗಮದ ಪುನಶ್ಚೇತನಕ್ಕೂ ನೆರವಾಗಲಿದೆ ಎಂದು ಸಚಿವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದಿರುವ ಪತ್ರದಲ್ಲಿ ವಿನಂತಿ ಮಾಡಿದ್ದಾರೆ.

****************